# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **517(714)** |
| **ಸದಸ್ಯರ ಹೆಸರು** | **ಶ್ರೀ ಚಿದಾನಂದ ಎಂ ಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **22-07-2024** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| **ಕ್ರ. ಸಂ** | **ಪ್ರಶ್ನೆ** | **ಉತ್ತರ** |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ: 440 ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 440 ಕಾಲೇಜುಗಳ ಪೈಕಿ 412 ಪ್ರಾಂಶುಪಾಲರ ಹುದ್ದೆಗಳು ಮಾತ್ರ ಮಂಜೂರಾಗಿದ್ದು ,ಮಂಜೂರಾದ ಎಲ್ಲಾ ಹುದ್ದೆಗಳು ಖಾಲಿ ಇರುತ್ತವೆ. |
| ಆ) | ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ನೇಮಕಾತಿ ಹಾಗೂ ಬಡ್ತಿ ನೀಡಲು ಇರುವ ಮಾನದಂಡಗಳೇನು; | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/91/ಡಿಸಿಇ/2004 ದಿನಾಂಕ: 25.09.2009 ರಲ್ಲಿ ಜಾರಿಗೊಳಿಸಿರುವ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>2006 ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ ದಿನಾಂಕ:24.12.2009 ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/37/ಯುಎನ್ಇ/2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ ಹೊರತು ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.<br><br>ಅದರಂತೆ, 2018ರ U.G.C. Regulations ನ 4.1.5 ರಲ್ಲಿ ಕಾಲೇಜು ಪ್ರಾಂಶುಪಾಲರ ಹುದ್ದೆಯ ಭರ್ತಿಗೆ ಈ ಕೆಳಕಂಡ ಮಾನದಂಡಗಳನ್ನು ನಿಗಧಿಪಡಿಸಲಾಗಿರುತ್ತದೆ.<br>**A. Eligibility**<br>(i) Ph.D Degree<br>(ii) Professor/Associate Professor with a total service/experience of at least fifteen years of teaching/research in Universities. Colleges and other institutions of higher education.<br>(iii) A minimum of 10 research publications in peer-reviewed of UGC –listed journals.<br>(iv) A minimum of 110 Research Score as per Appendix II, Table 2.<br><br>**B. Tenure** |

| | | |
|---|---|---|
| | | (i) A College Principal shalll be appointed for a period of five years, extendable for another term of five years on the basis of performance assessment by a Committee appointed by the University, constituted as per these regulations.<br>(ii) After the completion of his/her term as Prinicipal, the incumbent shall join back his/her parent organization with the designation as Professor and in the grade of the Professor. |
| ಇ) | ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು ಅರ್ಹ ಅಭ್ಯರ್ಥಿಗಳು ಲಭ್ಯವಿರುವರೇ; ಇದ್ದಲ್ಲಿ ಬಡ್ತಿ ನೀಡದಿರಲು ಕಾರಣಗಳೇನು; | ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು 2018ರ ಯು.ಜಿ.ಸಿ. ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಈ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಪ್ರಾಂಶುಪಾಲರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ನಿಯಮಗಳಲ್ಲಿ ಅವಕಾಶವಿದೆಯೇ; ಹಾಗಿದ್ದಲ್ಲಿ, ಸದರಿ ಆದೇಶ/ಸುತ್ತೋಲೆಯ ಪ್ರತಿಯನ್ನು ನೀಡುವುದು; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಉ) | ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸದ ಹಲವು ಅಭ್ಯರ್ಥಿಗಳು ನಕಲಿ ಸೇವಾ ಪ್ರಮಾಣ ಪತ್ರ ಪಡೆದು ಕೆ.ಇ.ಎ ನಡೆಸುವ ಪರೀಕ್ಷೆಯಲ್ಲಿ ಅರ್ಜಿ ಸಲ್ಲಿಸಿ, ತಾತ್ಕಾಲಿಕ ಸ್ಥಾನಗಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಅಭ್ಯರ್ಥಿಗಳ ಸೇವೆಯನ್ನು ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಲ್ಲಿಸಿರುವ ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿಯನ್ನು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ರ ನಿಯಮ 4 ರನ್ವಯ ಕಾಲೇಜು ಶಿಕ್ಷಣ ಆಯುಕ್ತರ ಅಧ್ಯಕ್ಷತೆಯಲ್ಲಿನ ಆಯ್ಕೆ ಪ್ರಾಧಿಕಾರವು, ಅವರುಗಳ ಶೈಕ್ಷಣಿಕ/ಮೀಸಲಾತಿ ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ದಿನಾಂಕ: 13.03.2024 ರ ಪತ್ರ ಸಂಖ್ಯೆ: ಇಡಿ 93 ಡಿಸಿಇ 2024(ಇ) ರಲ್ಲಿ ಸೂಚಿಸಲಾಗಿದ್ದು, ಅದರಂತೆ ಇಲಾಖೆಯಲ್ಲಿ ಪರಿಶೀಲನಾ ಪ್ರಕ್ರಿಯೆ ಕೈಗೊಳ್ಳಲು ಕ್ರಮವಹಿಸಲಾಗುವುದು.<br>ಆದ್ದರಿಂದ, ನಕಲಿ ಸೇವಾ ಪ್ರಮಾಣ ಪತ್ರ ಪಡೆದಿರುವ ಅಭ್ಯರ್ಥಿಗಳ ಮಾಹಿತಿ ಪ್ರಸ್ತುತ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಮುಂದೆ, ಪರಿಶೀಲನೆಯ ಸಂದರ್ಭದಲ್ಲಿ ಯಾರಾದರೂ ಅಭ್ಯರ್ಥಿಗಳು ನಕಲಿ ಸೇವಾ ಪ್ರಮಾಣ ಪತ್ರವನ್ನು ಪಡೆದಿರುವ ಬಗ್ಗೆ ದೃಢೀಕರಣಗೊಂಡಲ್ಲಿ ಅಂತಹ ಅಭ್ಯರ್ಥಿಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು. |
| ಊ) | ತಾಂತ್ರಿಕ ಶಿಕ್ಷಣ ಅಭ್ಯರ್ಥಿಗಳು ಸಹ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಲು | ದಿನಾಂಕ: 09-09-2020 ರ ಸಂಖ್ಯೆ ಇಡಿ 121 ಡಿಇಸಿ 2018 ರ ಸರ್ಕಾರದ ಅಧಿಸೂಚನೆ ನಿಯಮ 3(1) (ಎ), (ಬಿ), (ಸಿ) ಮತ್ತು (ಡಿ)ರಲ್ಲಿ ತಿಳಿಸಿರುವ ವಿದ್ಯಾರ್ಹತೆಯನ್ನು ಹೊಂದಿರುವ ಕರ್ನಾಟಕದ ವಿಶ್ವವಿದ್ಯಾಲಯಗಳಿಗೆ |

| | | |
|---|---|---|
| | ಅವಕಾಶ ನೀಡಲಾಗಿದೆಯೇ; ನೀಡಲಾಗಿದ್ದಲ್ಲಿ, ಸದರಿ ಪ್ರಾಂಶುಪಾಲರು ಯಾವ ವಿಷಯಕ್ಕೆ ಬೋಧಿಸಬಹುದು; | ಸಂಯೋಜನೆಗೊಂಡಿರುವ ಯಾವುದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅಥವಾ ಖಾಸಗಿ ಪದವಿ ಕಾಲೇಜಿನಲ್ಲಿ ಬೋಧನೆ ಅಥವಾ ಸಂಶೋಧನೆ ಅಥವಾ ಆಡಳಿತದಲ್ಲಿ ಪೂರ್ಣಕಾಲಿಕ ಭೋಧಕ ಸಿಬ್ಬಂದಿಯಾಗಿ ಒಟ್ಟು ಹದಿನೈದು ವರ್ಷಗಳ ಸೇವಾನುಭವ ಹೊಂದಿರುವ ಪ್ರಾಧ್ಯಾಪಕ/ಸಹ ಪ್ರಾಧ್ಯಾಪಕರು, ಪ್ರಾಂಶುಪಾಲರ ಹುದ್ದೆಗೆ ಅರ್ಜಿಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಋ) | ಉದ್ಯೋಗ ಭದ್ರತೆಯಿಲ್ಲದ ಕಾರಣ ಮೆರಿಟ್ ಅಭ್ಯರ್ಥಿಗಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರಾಂಶುಪಾಲರ ಹುದ್ದೆಗೆ ಬರಲು ಇಚ್ಛಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಖಾಯಂ ಆಗಿ ಪ್ರಾಂಶುಪಾಲರ ಹುದ್ದೆಗೆ ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | ಹದಿನೈದು ವರ್ಷಗಳ ಸೇವಾನುಭವ ಹೊಂದಿರುವ ಪ್ರಾಧ್ಯಾಪಕ/ಸಹ ಪ್ರಾಧ್ಯಾಪಕರು, ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದರಿಂದ ಉದ್ಯೋಗ ಭದ್ರತೆ ಇಲ್ಲವೆಂಬ ಪ್ರಶ್ನೆ ಉದ್ಭವಿಸುವುದಿಲ್ಲ. |

**ಇಡಿ 191 ಡಿಸಿಇ 2024 (ಇ)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು